# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎ : 0816-2255650, 2273511 ಫ್ಯಾಕ್ಸ್ :0816-2270719


ಸಂಖ್ಯೆ:ತುವಿ: ಪ.ವಿ.:ಪ.ಶುಲ್ಕ.:2022-23 :/1454 ದಿನಾಂಕ: 22.12.2022

## ಪರಿಷ್ಕೃತ ಅಧಿಸೂಚನೆ

**ವಿಷಯ:** 2023 ರಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳಿಗೆ ಸಂಬಂಧಿಸಿದಂತೆ 2005-06 ನೇ ಶೈಕ್ಷಣಿಕ ಸಾಲಿನಿಂದ 2017-18 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದು Double the Duration of the Course ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಅಂತಿಮ ಅವಕಾಶವಾಗಿ ಒಂದು ಬಾರಿ ಎಲ್ಲಾ ಅರ್ಹ ಪೂರಕ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

**ಉಲ್ಲೇಖ:** 1. ನಾಲ್ಕನೇ ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆಯ ದಿನಾಂಕ: 17.05.2022
2. ಸಂಖ್ಯೆ:ತುವಿ: ಪ.ವಿ.:ಪ.ಶುಲ್ಕ.:2022-23 :164 ದಿನಾಂಕ: 16.06.2022
3. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:20.12.2022

*****

2023 ರಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ I, II,III & IV ನೇ ಸೆಮಿಸ್ಟರ್‌ಗಳಿಗೆ ಸಂಬಂಧಿಸಿದಂತೆ 2005-06 ನೇ ಶೈಕ್ಷಣಿಕ ಸಾಲಿನಿಂದ 2017-18 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದು Double the Duration of the Course ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಅಂತಿಮ ಅವಕಾಶವಾಗಿ ಒಂದು ಬಾರಿ ಎಲ್ಲಾ ಅರ್ಹ ಪೂರಕ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 30.12.2022 |
| 2. | ವಿದ್ಯಾರ್ಥಿಗಳಿಗೆ ರೂ. 250/- ದಂಡ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 03.01.2023 |
| 3. | ವಿದ್ಯಾರ್ಥಿಗಳಿಗೆ ರೂ. 1000/- ವಿಶೇಷ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 07.01.2023 |
| 4. | ವಿಭಾಗ/ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 10.01.2023 |
| 5. | ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 13.01.2023 |

## ಪರೀಕ್ಷಾ ಶುಲ್ಕದ ವಿವರಗಳು

| ಸೆಮಿಸ್ಟರ್ | ಕೋರ್ಸ್ (ಪೂರಕ ವಿದ್ಯಾರ್ಥಿಗಳಿಗೆ ಮಾತ್ರ) | ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ಮತ್ತು ಇದರ ಜೊತೆಗೆ ಇತರೆ ಶುಲ್ಕಗಳನ್ನು ಸಹ ಪಾವತಿಸುವುದು | ಪೂರಕ (ಒಂದು ವಿಷಯಕ್ಕೆ) |
|---|---|---|---|
| I, II,III, IV | ಎಂ.ಎ./ಎಂ.ಕಾಂ./ ಎಂ.ಕಾಂ.-ಇನ್‌ಫಾರ್ಮೇಷನ್ ಸಿಸ್ಟಮ್/ಎಂ.ಎಸ್ಸಿ./ಎಂ.ಎಸ್‌ಕಮ್ಯೂನಿಕೇಷನ್/ಎಂ.ಎಸ್ಸಿ ಎಲೆಕ್ಟ್ರಾನಿಕ್ ಮೀಡಿಯಾ/ಎಂ.ಎಲ್.ಐ.ಎಸ್ಸಿ/ ಎಂ.ಎಸ್.ಡಬ್ಲ್ಯೂ./ ಎಂ.ಎಸ್ಸಿ. ಜೀವತಂತ್ರಜ್ಞಾನ/ಸೂಕ್ಷ್ಮ ಜೀವಶಾಸ್ತ್ರ /MCA/MBA / P.G.Diploma in coconut plantation/ Environmental Impact. | ರೂ. 5,000-00 | ರೂ. 1500-00 |

*** ವಿದ್ಯಾರ್ಥಿಯು ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ಪೂರ್ಣ ಶುಲ್ಕವನ್ನು ಪಾವತಿಸಬೇಕು.

ಪರೀಕ್ಷಾ ಶುಲ್ಕದಲ್ಲಿ ರಿಯಾಯಿತಿ ಪಡೆದಿರುವ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಎಲ್ಲಾ ವಿದ್ಯಾರ್ಥಿಗಳಿಂದ ಕಡ್ಡಾಯವಾಗಿ ಪಾವತಿಸಿಕೊಳ್ಳಬೇಕಾದ ಇತರೆ ಶುಲ್ಕದ ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ( ಪ್ರತಿ ಸೆಮಿಸ್ಟರ್‌ಗೆ) | 500-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 100-00 |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00 |

## ಶುಲ್ಕ ವಿನಾಯಿತಿ

**ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ:**

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ.2.50 ಲಕ್ಷದೊಳಗಿದ್ದರೆ ಸರ್ಕಾರ/ವಿಶ್ವವಿದ್ಯಾನಿಲಯದಲ್ಲಿ ಜಾರಿ ಇರುವ ಶುಲ್ಕ ರಿಯಾಯಿತಿಯನ್ನು ನೀಡಲಾಗಿದೆ.

**ಪರೀಕ್ಷಾ ಕೇಂದ್ರವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.**

- ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರವನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸಂಬಂಧಿಸಿದ ವಿಷಯಗಳಿಗೆ/ ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ, ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯ ಸರಬರಾಜಿನಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ನಿರ್ದೇಶಕರು/ಪ್ರಾಂಶುಪಾಲರು/ಮುಖ್ಯಸ್ಥರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.
- ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಆನ್‌ಲೈನ್‌ನಲ್ಲಿ ಕೋರುವ ಎಲ್ಲಾ ಮಾಹಿತಿಯನ್ನು ಸರಿಯಾಗಿ ನಮೂದಿಸಬೇಕು.
- ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ.
- ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ತುಮಕೂರು ವಿಶ್ವವಿದ್ಯಾನಿಲಯದ ನಿಧಿಗೆ **RTGS / NEFT ಮೂಲಕ ಎಸ್.ಬಿ.ಐ. ಖಾತೆ ನಂ.36954908103 ಗೆ ದಿನಾಂಕ: 13.01.2023 ರೊಳಗೆ ಪಾವತಿಸುವುದು.**
- ವಿಭಾಗದ ಮುಖ್ಯಸ್ಥರು/ ಸಂಯೋಜಕರು ವಿದ್ಯಾರ್ಥಿಗಳಿಂದ S B I Collect ಮುಖಾಂತರ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು ಮತ್ತು ವಿದ್ಯಾರ್ಥಿಗಳಿಂದ ಶುಲ್ಕ ಪಾವತಿ ರಶೀದಿಯನ್ನು ಪಡೆಯುವುದು.
- **ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು (ಸೆಮಿಸ್ಟರ್‌ವಾರು ವಿದ್ಯಾರ್ಥಿಯ ಹೆಸರು, ನೋಂದಣಿ ಸಂಖ್ಯೆ, ವರ್ಗ, ಪರೀಕ್ಷಾ ಶುಲ್ಕದ ಮೊತ್ತ, S B I Collect reference Number ಮತ್ತು ದಿನಾಂಕಗಳ ಮಾಹಿತಿಗಳೊನ್ನೊಳಗೊಂಡ ಪಟ್ಟಿ)** ಸಂಬಂಧಿಸಿದ ದಾಖಲೆಗಳೊಂದಿಗೆ (ಹಣ ಪಾವತಿಸಿದ ರಶೀದಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನಕಲು ಪ್ರತಿ) ವಿಭಾಗದ ಮುಖ್ಯಸ್ಥರು/ನಿರ್ದೇಶಕರು/ ಪ್ರಾಂಶುಪಾಲರು ದೃಢೀಕರಿಸಿ

P. T. O.

- ದಿನಾಂಕ: 13.01.2023 ರೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು
- ದ್ವಿಪ್ರತಿಗಳಲ್ಲಿ. (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).
- ಒಮ್ಮೆ ವಿಶ್ವವಿದ್ಯಾನಿಲಯಕ್ಕೆ ಪಾವತಿಸಿದ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿಸುವುದಿಲ್ಲ ಹಾಗೂ ಇತರೆ ಶುಲ್ಕಕ್ಕೆ ಮರುಹೊಂದಿಸಲಾಗುವುದಿಲ್ಲ.
- ಪುನರಾವರ್ತಿತ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದಿಂದ ಘೋಷಣೆಯಾಗುವ ರ್‍ಯಾಂಕ್‌ಗೆ ಅರ್ಹರಿರುವುದಿಲ್ಲ.

ಸೂಚನೆ:-ವಿಷಯವಾರು ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರಿಕ್ಷಾ ಅರ್ಜಿಯನ್ನು ಸಲ್ಲಿಸುವುದು. ಸಾಧ್ಯವಾಗದಿದ್ದಲ್ಲಿ ಈ ಕೆಳಕಂಡಂತೆ ಪರೀಕ್ಷಾ ಶುಲ್ಕದ ವಿವರವನ್ನು ಸಲ್ಲಿಸುವುದು.

| ಕ್ರ.ಸಂ. | ನೊಂದಣಿ ಸಂಖ್ಯೆ | ವಿದ್ಯಾರ್ಥಿಯ ಹೆಸರು | ಸೆಮಿಸ್ಟರ್ | ವಿಷಯ | ಶುಲ್ಕದ ವಿವರ |
|---|---|---|---|---|---|
| 1. | | | | | |

ಸೈದ್ಧಾಂತಿಕ (ಪಠ್ಯ ವಿಷಯ - Theory) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.

ಎಲ್ಲಾ, ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಪಾಲರುಮುಖ್ಯಸ್ಥರು ಸಹಕರಿಸಬೇಕಾಗಿ ಕೋರಲಾಗಿದೆ.

ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಉಪಕುಲಸಚಿವರು(ಪರೀಕ್ಷಾಂಗ)ರವರನ್ನು (ಮೊಬೈಲ್ ಸಂಖ್ಯೆ: 9141797475) ಸಂಪರ್ಕಿಸುವುದು.

ಆದೇಶದ ಮೇರೆಗೆ

ಕುಲಸಚಿವರು(ಪರೀಕ್ಷಾಂಗ)

ಗೆ, ಮುಖ್ಯಸ್ಥರು/ ಸಂಯೋಜಕರು /ನಿರ್ದೇಶಕರು / ಪ್ರಾಂಶುಪಾಲರು/. ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು..
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವಿಶ್ವವಿದ್ಯಾನಿಲಯದ ಅಂತರ್ಜಾಲ (ವೆಬ್‌ಸೈಟ್) ದಲ್ಲಿ ಇಂದೇ ಪ್ರಕಟಿಸುವುದು.
8. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.